# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 455
2. ಸದಸ್ಯರ ಹೆಸರು : ಶ್ರೀ ಆರ್ ಧರ್ಮಸೇನ
   (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)
3. ಉತ್ತರಿಸಬೇಕಾದ ದಿನಾಂಕ : 13.12.2018
4. ಉತ್ತರಿಸುವ ಸಚಿವರು : ಮುಖ್ಯಮಂತ್ರಿ

| ಪ್ರಶ್ನೆ | ಉತ್ತರ |
|---|---|
| ಅ) ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ;<br><br>ಆ) ಹಲವಾರು ವರ್ಷಗಳಿಂದ ಭರ್ತಿ ಮಾಡದಿರುವುದರಿಂದ ಲಕ್ಷಾಂತರ ಹುದ್ದೆಗಳು ಖಾಲಿ ಇದ್ದು ಇದರಿಂದ ಆಡಳಿತದ ಮೇಲೆ ಪರಿಣಾಮ ಬೀರುವುದಿಲ್ಲವೇ;<br><br>ಇ) ಎಷ್ಟು ದಿವಸಗಳಲ್ಲಿ ಭರ್ತಿ ಮಾಡುವ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗುತ್ತದೆ. | ಖಾಲಿಯಿರುವ ಹುದ್ದೆಗಳನ್ನು ತುಂಬಲು ಇಲಾಖಾ ಮುಖ್ಯಸ್ಥರುಗಳು ಸಚಿವಾಲಯದ ಆಡಳಿತ ಇಲಾಖೆಗಳಿಗೆ ಪ್ರಸ್ತಾವನೆ ಸಲ್ಲಿಸಿದ ನಂತರ, ಆಡಳಿತ ಇಲಾಖೆಗಳು ಆರ್ಥಿಕ ಇಲಾಖೆಯ ಸಹಮತಿ ಪಡೆದು ಖಾಲಿ ಹುದ್ದೆಗಳನ್ನು ತುಂಬಬೇಕಾಗುತ್ತದೆ. ಆದರೆ, ಅನುಚ್ಛೇದ 371(ಜೆ)ರಡಿ ಸ್ಥಳೀಯ ವೃಂದದ ಖಾಲಿ ಹುದ್ದೆಗಳನ್ನು ತುಂಬಲು ಮಿತವ್ಯಯ ಆದೇಶ ಅನ್ವಯವಾಗುವುದಿಲ್ಲ. ಇದಕ್ಕೆ ಆರ್ಥಿಕ ಇಲಾಖೆಯು ಸಹಮತಿ ನೀಡಿದೆ ಎಂದು ಭಾವಿಸಿ ಮುಂದಿನ ಕ್ರಮ ಕೈಗೊಳ್ಳಲಾಗುತ್ತಿದೆ. ಆರ್ಥಿಕ ಮಿತವ್ಯಯ ಜಾರಿಯಲ್ಲಿದ್ದರೂ ಸಹ ಇಲಾಖೆಗಳಿಂದ ಬರುವ ಪ್ರಸ್ತಾವನೆಗಳನ್ನು ಪ್ರಕರಣವಾರು ಪರಿಶೀಲಿಸಿ ಅಗತ್ಯತೆಗೆ ತಕ್ಕಂತೆ ಹುದ್ದೆಗಳ ಸೃಜನೆ ಹಾಗೂ ಭರ್ತಿ ಮಾಡಲು ಆರ್ಥಿಕ ಇಲಾಖೆಯು ಸಹಮತಿಯನ್ನು ನೀಡುತ್ತಿದೆ.<br><br>ಖಾಲಿ ಹುದ್ದೆಗಳನ್ನು ತುಂಬಲು ಅನುಮತಿ ಪಡೆದ ನಂತರ ಇಲಾಖೆಗಳು ಆ ಖಾಲಿ ಹುದ್ದೆಗಳನ್ನು ಕರ್ನಾಟಕ ಲೋಕಸೇವಾ ಆಯೋಗ ಹಾಗೂ ಇತರೆ ಆಯ್ಕೆ ಪ್ರಾಧಿಕಾರಗಳಿಗೆ ಬಿಡುಗಡೆ ಮಾಡುತ್ತಿವೆ.<br><br>ಪ್ರಾಮುಖ್ಯವಾದ ಹುದ್ದೆಗಳಲ್ಲಿ ಆಡಳಿತಾತ್ಮಕ ತೊಂದರೆಗಳ ನಿವಾರಣೆಗಾಗಿ ಪ್ರಭಾರಿ ವ್ಯವಸ್ಥೆಗಳನ್ನು ಮಾಡಿ ಆಡಳಿತದ ಮೇಲೆ ಪರಿಣಾಮ ಬೀರದಂತೆ ಹಾಗೂ ಸಾರ್ವಜನಿಕ ಕೆಲಸ ಕಾರ್ಯಗಳು ಕುಂಠಿತವಾಗದಂತೆ ಕ್ರಮ ಕೈಗೊಳ್ಳಲಾಗುತ್ತಿದೆ. |
| ಈ)ಹಲವಾರು ವರ್ಷಗಳಿಂದ ನೇಮಕಾತಿಗಳಾಗದಿರುವುದರಿಂದ ಸೇವೆಗೆ ಸೇರಲು ಇರುವ ವಯೋಮಿತಿಯನ್ನು ಹೆಚ್ಚಿಸುವ ಬಗ್ಗೆ ಸರ್ಕಾರ ಪರಿಶೀಲಿಸುತ್ತದೆಯೇ? | ಅಂತಹ ಯಾವುದೇ ಪ್ರಸ್ತಾವನೆಯು ಸದ್ಯಕ್ಕೆ ಸರ್ಕಾರದ ಪರಿಶೀಲನೆಯಲ್ಲಿರುವುದಿಲ್ಲ. |

ಸಂಖ್ಯೆ: ಸಿಆಸುಇ 245 ಸೇವನೆ 2018

(ಹೆಚ್.ಡಿ.ಕುಮಾರಸ್ವಾಮಿ)
ಮುಖ್ಯಮಂತ್ರಿ.